O.S.No.269/2024
P.W.:1

ಈ ದಿನ ದಿಃ13.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಆರ್.ಜಿ.ಕೆ ರವರಿಂದಃ-**

ವಾದಿಯು ನನಗೆ ತಾಯಿಯಾಗಬೇಕು. ನನಗೆ ಈ ದಾವೆಯಲ್ಲಿ ವಾದಿಯು ಸಾಮಾನ್ಯ ಅಧಿಕಾರ ಪತ್ರ ಬರೆದುಕೊಟ್ಟಿದ್ದು, ನಾನು ವಾದಿಯ ಪರವಾಗಿ ಸಾಕ್ಷ್ಯ ನುಡಿಯಲು ಬಂದಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ವಾದಿ ನನಗೆ ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**